ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ

ಅನ್ವಯಿಸುವುದಿಲ್ಲ

ಡಾ ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ

ಅನ್ವಯಿಸುವುದಿಲ್ಲ

569(1067) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆಲಮಂಗಲ ಪಟ್ಟಣದ ಮೂಲಕ ರಾಷ್ಟ್ರೀಯ ಹೆದ್ದಾರಿ–4, ರಾಷ್ಟ್ರೀಯ ಹೆದ್ದಾರಿ 48 ಹಾದು ಹೋಗಿರುವುದರಿಂದ ದಿನ ನಿತ್ಯ ನೂರಾರು ಅಪಘಾತಗಳು ಸಂಭವಿಸುತ್ತಿರುವುದರಿಂದ ಸಾಕಷ್ಟು ಸಾವು ನೋವುಗಳುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಸಾವು ನೋವುಗಳನ್ನು ತಪ್ಪಿಸಲು ಪಟ್ಟಣದಲ್ಲಿರುವ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಿ ಅತ್ಯವಶ್ಯಕವಾಗಿ ಬೇಕಾಗಿರುವ ಉಪಕರಣಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಇ) ನೆಲಮಂಗಲ ಮತಕ್ಷೇತ್ರಕ್ಕೆ ಸೇರಿದ ಮಾಗಡಿ ತಾಲ್ಲೂಕಿನ ಸೋಲೂರು ಹೋಬಳಿ, ಸೋಲೂರು ಗ್ರಾಮದ ಮುಖಾಂತರ ರಾಷ್ಟ್ರೀಯ ಹೆದ್ದಾರಿ–48 ಹಾದು ಹೋಗಿರುವುದರಿಂದ ದಿನನಿತ್ಯ ಅಪಘಾತ ಸಂಭವಿಸುವುದರಿಂದ' ಸರಿಯಾದ ಚಿಕಿತ್ಸೆ ದೊರೆಯದೇ ಬಹಳಷ್ಟು ಸಾವು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಸೋಲೂರು ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಈಗಾಗಲೇ ನೆಲಮಂಗಲ ತಾಲ್ಲೂಕು ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ಹಾಗೂ ಟ್ರಾಮಾ ಕೇರ್ ಸೆಂಟರ್ ಎಂದು 12ನೇ ಹಣಕಾಸು ಯೋಜನೆಯಡಿ ಗುರುತಿಸಲಾಗಿದ್ದು, ಅವಶ್ಯಕ ಉಪಕರಣಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗುತ್ತಿದೆ

ಇ) ಸೋಲೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡುವ ಸೌಲಭ್ಯಗಳಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಹತ್ತಿರವಿರುವ ಮಾಗಡಿ ತಾಲ್ಲೂಕು ಆಸ್ಪತ್ರೆಯಲ್ಲಿ ತಜ್ಞ ಚಿಕಿತ್ಸೆಗೆ ಸೌಲಭ್ಯ ಕಲ್ಪಿಸಿದೆ ಈಗಾಗಲೇ ಮಾಗಡಿ ಆಸ್ಪತ್ರೆಯನ್ನು 100 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ

ಈ) ಮಾಗಡಿ ತಾಲ್ಲೂಕಿನ ಗ್ರಾಮಾಂತರ ಜನಸಂಖ್ಯೆ 175962 ಇದ್ದು, ಒಂದು ಸಮುದಾಯ ಆರೋಗ್ಯ ಕೇಂದ್ರ ಇರುತ್ತದೆ

ಮಾರ್ಗಸೂಚಿ ಪ್ರಕಾರ ಸೋಲೂರು ಗ್ರಾಮದ ಪ್ರಾ ಆ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಬಗ್ಗೆ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು

570(1068) ಶ್ರೀ ಅಂಜನಾಮೂರ್ತಿ (ನೆಲಮಂಗಲ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಪಂಗಡ ವಿದ್ಯಾವಂತ ನಿರುದ್ಯೋಗಿಗಳ ಸಹಾಯಕ್ಕಾಗಿ 2006–07ನೇ ಸಾಲಿನಲ್ಲಿ ಕಾದಿರಿಸಲಾಗಿರುವ ಹಣ ಎಷ್ಟು?

ಆ) ಈ ಹಣವನ್ನು ಯಾವ ಯಾವ ತಾಲ್ಲೂಕಿನ ಎಷ್ಟು ಜನತೆಗೆ ವಿನಿಯೋಗಿಸಲಾಗಿದೆ?

ಇ) ಮೈಸೂರು ಜಿಲ್ಲೆಯ ಚಾಮುಂಡಿ ಕ್ಷೇತ್ರದ ಎಷ್ಟು ಜನರಿಗೆ ಈ ಹಣವನ್ನು ವಿತರಿಸಲಾಗಿದೆ?

ಶ್ರೀ ಬಾಲಚಂದ್ರ ಲ ಜಾರಕಿ ಹೊಳಿ (ಸಮಾಜ ಕಲ್ಯಾಣ ಸಚಿವರು).

ಅ) ನಿಗಮದಿಂದ 2006–07ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಗೆ 700 ಲಕ್ಷ ಹಾಗೂ ಪರಿಶಿಷ್ಟ ವರ್ಗಕ್ಕೆ 300 ಲಕ್ಷ ಕಾದಿರಿಸಲಾಗಿದೆ

ಆ) ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ

ಇ) 5,940 ಜನರಿಗೆ ರೂ 2,97,00,000/– ವಿತರಿಸಲಾಗಿದೆ